# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : | 887 |
| ಸದಸ್ಯರ ಹೆಸರು | : | ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | ~~18~~ 12.03.2020 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ವಿಧಾನ ಪರಿಷತ್ತಿನ ಸದಸ್ಯರಿಗೆ ಒದಗಿಸುತ್ತಿರುವ ಎರಡು ಆಪ್ತ ಸಹಾಯಕರ ಹುದ್ದೆಗೆ ಸಂಬಂಧಪಟ್ಟಂತೆ ಇರುವ ಆದೇಶ, ನಿಯಮ ಹಾಗೂ ಮಾನದಂಡಗಳ ಪ್ರತಿ ಒದಗಿಸುವುದು; | 1. ಸಿಆಸುಇ 48 ಶಿಸನೇ 2015, ದಿನಾಂಕ:11.05.2015<br>2. ಸಿಆಸುಇ 123 ಶಿಸನೇ 2010, ದಿನಾಂಕ:21.05.2010<br><br>ಆದೇಶದ, ನಿಯಮ ಹಾಗೂ ಮಾನದಂಡಗಳ ಪ್ರತಿಗಳನ್ನು ಅನುಬಂಧದಲ್ಲಿರಿಸಿದೆ. |
| ಆ) | ಸದಸ್ಯರು ಆಯ್ಕೆ ಮಾಡಿಕೊಂಡಿರುವ ನೋಡಲ್ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ನೋಡಲ್ ತಾಲ್ಲೂಕಿನ ತಹಶೀಲ್ದಾರರು ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಿಗೆ ಆಪ್ತ ಸಹಾಯಕರನ್ನು ಒದಗಿಸುವ ಕುರಿತು ಮಾನ್ಯ ಸದಸ್ಯರಿಂದ ಮನವಿ ಸ್ವೀಕೃತವಾದ ನಂತರ ಕೈಗೊಳ್ಳಬೇಕಾದ ಕ್ರಮಗಳೇನು; | ಮಾನ್ಯ ಸದಸ್ಯರಿಂದ ಸ್ವೀಕೃತವಾದ ಮನವಿಗಳನ್ನು ಸರ್ಕಾರದ ಆದೇಶಗಳಲ್ಲಿ ನೀಡಲಾಗಿರುವ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಆಪ್ತ ಸಹಾಯಕರನ್ನು ನೇಮಿಸುವ ಕುರಿತು ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತದೆ. |
| ಇ) | ಜಿಲ್ಲಾಧಿಕಾರಿಗಳು ಆದೇಶ ಮಾಡುವ ಆಪ್ತ ಸಹಾಯಕರುಗಳಿಗೆ ಯಾವ ಲೆಕ್ಕಶೀರ್ಷಿಕೆಯಲ್ಲಿ ವೇತನ ಪಾವತಿಸಲಾಗುವುದು ಹಾಗೂ ಹೊರಗುತ್ತಿಗೆ ನೌಕರರನ್ನು ಆಪ್ತ ಸಹಾಯಕರನ್ನಾಗಿ ನೇಮಿಸದಂತೆ ಸದಸ್ಯರು ಕೋರಿದಾಗ ಆ ಜಿಲ್ಲೆಯಲ್ಲಿನ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಸಮನಾಂತರ ಹುದ್ದೆ ಖಾಲಿ ಇರಬೇಕು ಎಂಬ ನಿಯಮವೇನಾದರು ಇದೆಯೇ? | ಜಿಲ್ಲಾಧಿಕಾರಿಗಳು ಆದೇಶ ಮಾಡುವ ಆಪ್ತ ಸಹಾಯಕರುಗಳಿಗೆ (ನಿಯೋಜನೆ ಮೇಲೆ ನೇಮಕಗೊಂಡ ಸರ್ಕಾರಿ ನೌಕರರಿಗೆ) ಲೆಕ್ಕಶೀರ್ಷಿಕೆ 2011-02-101-0-09 ಮತ್ತು 2011-02-102-0-09 ರಡಿ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಆಪ್ತ ಸಹಾಯಕರನ್ನು ನೇಮಿಸಿದಾಗ ಲೆಕ್ಕಶೀರ್ಷಿಕೆ 2053-00-093-1-01-034 ರಡಿ ಸಾದಿಲ್ವಾರು ಬಿಲ್ಲಿನಲ್ಲಿ ವೇತನ ಪಾವತಿಸಲಾಗುವುದು. |

| | | |
|---|---|---|
| | | ಹೊರಗುತ್ತಿಗೆ ನೌಕರರನ್ನು ಆಪ್ತ ಸಹಾಯಕರನ್ನಾಗಿ ನೇಮಿಸದಂತೆ ಸದಸ್ಯರು ಕೋರಿದಾಗ ಆ ಜಿಲ್ಲೆಯಲ್ಲಿನ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಸಮನಾಂತರ ಹುದ್ದೆ ಖಾಲಿ ಇರಬೇಕು ಎಂಬ ನಿಯಮ ಇರುವುದಿಲ್ಲ. |

**ಕಂಇ 33 ಡಬ್ಲ್ಯೂಬಿಆರ್ 2020**

**(ಆರ್. ಅಶೋಕ)**
ಕಂದಾಯ ಸಚಿವರು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶಾಸಕರುಗಳಿಗೆ ಆಪ್ತ ಸಹಾಯಕರನ್ನು ಒದಗಿಸುವ ಬಗ್ಗೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 180 ಶಾಸವೆ 99, ಬೆಂಗಳೂರು, ದಿನಾಂಕ 01-02-2000.**

**ಓದಲಾಗಿದೆ:**

1. ದಿನಾಂಕ 28-11-1996 ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 90 ಶಾಸವೆ 96.
2. ದಿನಾಂಕ 16-12-1996 ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 90 ಶಾಸವೆ 96.

**ಪ್ರಸ್ತಾವನೆ:**

ವಿಧಾನ ಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರುಗಳಿಗೆ ಆಪ್ತ ಸಹಾಯಕರನ್ನು ಒದಗಿಸುವ ಬಗ್ಗೆ ಮೇಲೆ (1) ಮತ್ತು (2) ರಲ್ಲಿ ಓದಲಾದ ಅಧಿಕೃತ ಜ್ಞಾಪನಗಳಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆಯನ್ನು ನೀಡಿದೆ. ದಿನಾಂಕ 08-09-1997 ರಂದು ನಡೆದ ವಿಧಾನ ಮಂಡಲ ಕಾರ್ಯಕಲಾಪ ಸಲಹಾ ಸಮಿತಿಯ ಸಭೆಯಲ್ಲಿ, ಶಾಸಕರುಗಳಿಗೆ ಆಪ್ತ ಸಹಾಯಕರನ್ನು ನೀಡುವ ವಿಷಯದಲ್ಲಿ ಶಾಸಕರುಗಳು ತಮಗೆ ಇಷ್ಟ ಬಂದ ಸರ್ಕಾರಿ ನೌಕರರನ್ನು ರಾಜ್ಯದ ಯಾವುದೇ ಇಲಾಖೆಯಿಂದ ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಬೇಕೆಂದು ತೀರ್ಮಾನಿಸಲಾಯಿತು. ಸಲಹಾ ಸಮಿತಿಯ ಈ ತೀರ್ಮಾನವನ್ನು ಸರ್ಕಾರವು ಪರಿಶೀಲಿಸಿದ್ದು, ಈ ಆದೇಶ ಹೊರಡಿಸಿದೆ.

## ಆದೇಶ

ಮೇಲ್ಕಂಡ ಪರಿಶೀಲನೆಯ ಹಿನ್ನೆಲೆಯಲ್ಲಿ ಹಾಗೂ ದಿನಾಂಕ 28-11-1996 ಮತ್ತು ದಿನಾಂಕ 16-12-1996 ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 90 ಶಾಸವೆ 96 ರಲ್ಲಿ ಭಾಗಶಃ ಮಾರ್ಪಡಿಸಲಾಗಿ, ರಾಜ್ಯ ಸರ್ಕಾರದ ಯಾವುದೇ ಇಲಾಖೆಗಳ 'ಸಿ' ವೃಂದದ ಸರ್ಕಾರಿ ನೌಕರರನ್ನು ಆಪ್ತ ಸಹಾಯಕರನ್ನಾಗಿ ನೇಮಿಸಲು ಸರ್ಕಾರವು ಆದೇಶಿಸಿದೆ. ಅದರನ್ವಯ ಕ್ರಮ ತಗೆದುಕೊಳ್ಳುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದೆ.

ಆಪ್ತ ಸಹಾಯಕರುಗಳ ವೇತನ ಮತ್ತು ಭತ್ಯೆಗಳನ್ನು ಪಾವತಿ ಮಾಡುವ ಸಲುವಾಗಿ ತಹಶೀಲ್ದಾರರುಗಳನ್ನು ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲು ಅಧಿಕಾರ ನೀಡಲಾಗಿದೆ. ಜಿಲ್ಲಾಧಿಕಾರಿಗಳು ಮತ್ತು ಕರ್ನಾಟಕ ವಿಧಾನ ಸಭೆಯ ಸಚಿವಾಲಯದ ಹಾಗೂ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಕಾರ್ಯದರ್ಶಿಗಳು ಈ ಉದ್ದೇಶಕ್ಕಾಗಿ ಕ್ರಮವಾಗಿ ನಿಯಂತ್ರಣಾಧಿಕಾರಿಗಳು ಹಾಗೂ ಮುಖ್ಯ ನಿಯಂತ್ರಣಾಧಿಕಾರಿಗಳಾಗಿ ಕಾರ್ಯನಿರ್ವಹಿಸುವರು. ಮಹಾಲೇಖಪಾಲರ ಕಛೇರಿಯೊಂದಿಗೆ ಲೆಕ್ಕ ಹೊಂದಾಣಿಕೆ ವ್ಯವಹಾರಗಳನ್ನು ಮುಖ್ಯ ನಿಯಂತ್ರಣಾಧಿಕಾರಿಗಳು ನಿರ್ವಹಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು [illegible] ಈ ಕೆಳಕಂಡ ಲೆಕ್ಕ ಶೀರ್ಷಿಕೆಯಡಿಯಲ್ಲಿ ಭರಿಸತಕ್ಕದ್ದು:-

(1) 2011-02-101-0-02-ವಿಧಾನ ಸಭಾ ಸದಸ್ಯರ ಆಪ್ತ ಸಹಾಯಕರ ಸಂಬಳಗಳು

(2) 2011-02-102-0-09-ವಿಧಾನ ಪರಿಷತ್ತಿನ ಸದಸ್ಯರ ಆಪ್ತ ಸಹಾಯಕರ ಸಂಬಳಗಳು.

1737

ಪುಟ - 2ಕ್ಕೆ

ಈ ಆದೇಶವನ್ನು ಆರ್ಥಿಕ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ ... 2000, ದಿನಾಂಕ 11-01-2000 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

[signature] 1/2/2000

(ಎಂ.ಎಸ್. ಗಣಪತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ
(ರಾಜ್ಯ ಶಿಷ್ಟಾಚಾರ).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ದಿನಾಂಕ 02-02-2000 ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸುವಂತೆ ಹಾಗೂ ಆದೇಶದ 1,000 (ಒಂದು ಸಾವಿರ) ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆಯ (ಸಾಮಾನ್ಯ-ಬಿ) ಶಾಖೆಗೆ ಸರಬರಾಜು ಮಾಡುವಂತೆ ಕೋರಲಾಗಿದೆ.

ಪ್ರತಿಗಳು:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನ ಸೌಧ, ಬೆಂಗಳೂರು-1
3. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ, ವಿಧಾನ ಸೌಧ, ಬೆಂಗಳೂರು-1
4. ಮಾನ್ಯ ಮುಖ್ಯ ಮಂತ್ರಿಗಳ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
5. ಎಲ್ಲಾ ವಿಭಾಗಾಧಿಕಾರಿಗಳು/ಜಿಲ್ಲಾಧಿಕಾರಿಗಳು
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
7. ಎಲ್ಲಾ ಖಜಾನಾಧಿಕಾರಿಗಳು
8. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಅಶಿಸ್ತು), ವಿಧಾನ ಸೌಧ, ಬೆಂಗಳೂರು-1
9. ಸಚಿವ ಸಂಪುಟ ಶಾಖೆ (ವಿಷಯ ಸಂಖ್ಯೆ: ಸಿ:18:2000)
10. ಆರ್ಥಿಕ ಇಲಾಖೆ (ವೆಚ್ಚ-5), ವಿಧಾನ ಸೌಧ, ಬೆಂಗಳೂರು-1
11. ಕಡತ/ಬಿಡಿ ಪ್ರತಿಗಳು.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 180 ತಿಸನೆ 99

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು; ದಿನಾಂಕ: 08-03-2000.

ತಿದ್ದುಪಡಿ

ವಿಷಯ: ಶಾಸಕರುಗಳಿಗೆ ಆಪ್ತ ಸಹಾಯಕರನ್ನು ಒದಗಿಸುವ ಬಗ್ಗೆ.

:———:

ದಿನಾಂಕ 01-02-2000ದ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 180 ತಿಸನೆ 99 ರಲ್ಲಿನ ಆದೇಶದ ಭಾಗದಲ್ಲಿನ ಹಾಲಿ ಲೆಕ್ಕ ಶೀರ್ಷಿಕೆ '' 2011-02-101-0-02-ವಿಧಾನಸಭಾ ಸದಸ್ಯರ ಆಪ್ತ ಸಹಾಯಕರ ಸಂಬಳಗಳು '' ಎಂಬುದರ ಬದಲಿಗೆ '' 2011-02-101-0-09-ವಿಧಾನಸಭಾ ಸದಸ್ಯರ ಆಪ್ತ ಸಹಾಯಕರ ಸಂಬಳಗಳು '' ಎಂದು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ;

ಎಂ.ಎಸ್.ಗಣಪತಿ 8/3/2000

(ಎಂ. ಎಸ್. ಗಣಪತಿ)
ಸರ್ಕಾರದ ಅಧೀನ ಕಾರ್ಯದರ್ಶಿಗಳು
ಸಿಆಸುಇ(ರಾಜ್ಯ ಶಿಷ್ಟಾಚಾರ)

20 MAR 2000

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ದಿನಾಂಕ 08-03-2000ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸುವಂತೆ ಹಾಗೂ ಆದೇಶದ 1,000 (ಒಂದು ಸಾವಿರ) ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸಾಮಾನ್ಯ-ಬಿ) ಶಾಖೆಗೆ ಸರಬರಾಜು ಮಾಡುವಂತೆ ಕೋರಲಾಗಿದೆ.

ಪ್ರತಿಗಳು:-

(1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
(2) ಕಾರ್ಯದರ್ಶಿಗಳು, ಕರ್ನಾಟಕ ವಿಧಾನಸಭೆ ಸಚಿವಾಲಯ ವಿಧಾನಸೌಧ, ಬೆಂಗಳೂರು-1
(3) ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ, ವಿಧಾನಸೌಧ, ಬೆಂಗಳೂರು-1;
(4) ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
(5) ಎಲ್ಲಾ ವಿಭಾಗಾಧಿಕಾರಿಗಳು: ಜಿಲ್ಲಾಧಿಕಾರಿಗಳು
(6) ಎಲ್ಲಾ ಇಲಾಖಾ ಮುಖ್ಯಸ್ಥರುಗಳು
(7) ಎಲ್ಲಾ ತಹಶೀಲ್ದಾರರುಗಳು
(8) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ(ಲೆಕ್ಕಪತ್ರ). ವಿಧಾನಸೌಧ, ಬೆಂಗಳೂರು
(9) ಸಚಿವ ಸಂಪುಟ ಶಾಖೆ (ವಿಷಯ ಸಂಖ್ಯೆ: ಸಿ. 18:2000)
(10) ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು
(11) ಶಾಖಾ ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರದ ನಡವಳಿಗಳು

**<u>ವಿಷಯ:</u>** ಮಾನ್ಯ ಶಾಸಕರುಗಳ ಆಪ್ತ ಸಹಾಯಕರ ನೇಮಕಾತಿ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸುವ ಬಗ್ಗೆ

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 177 [illegible] 2009 ದಿನಾಂಕ 23-02-2010
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 544 ಅಹಿಸೇ 2008 ದಿನಾಂಕ 29-01-2009

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಗ್ರೂಪ್ ಸಿ ವೃಂದದಲ್ಲಿ ಪ್ರಥಮ ದರ್ಜೆ ಸಹಾಯಕರ / ದ್ವಿತೀಯ ದರ್ಜೆ ಸಹಾಯಕರು/ ಶೀಘ್ರಲಿಪಿಗಾರರಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳನ್ನು ಮಾತ್ರ ಅವರ ವಿದ್ಯಾರ್ಹತೆಗನುಗುಣವಾಗಿ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಪ್ರಥಮ ದರ್ಜೆ ಸಹಾಯಕರ/ ದ್ವಿತೀಯ ದರ್ಜೆ ಸಹಾಯಕರ/ ಶೀಘ್ರಲಿಪಿಗಾರರ ಹುದ್ದೆಗಳಿಗೆದುರಾಗಿ ಗುತ್ತಿಗೆ ಆಧಾರದ ಮೇಲೆ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15(1)(ಎ)(VII)ರನ್ವಯ ಮಾನ್ಯ ಶಾಸಕರ ಆಪ್ತ ಸಹಾಯಕರಾಗಿ ಸರ್ಕಾರದಿಂದ ಅನುಮೋದಿಸಲ್ಪಟ್ಟ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ನೇಮಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಅವಕಾಶ ನೀಡಲಾಗಿದೆ. ಮೇಲೆ ಓದಲಾದ (2)ರ ಅಧಿಕೃತ ಜ್ಞಾಪನದಲ್ಲಿ ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯ, ಸಚಿವರ ಆಪ್ತ ಶಾಖೆ, ವಿಧಾನ ಪರಿಷತ್ತು/ಸಭೆ; ರಾಜ್ಯ ಸಭೆ/ ಲೋಕ ಸಭಾ ಸದಸ್ಯರ ಆಪ್ತ ಸಿಬ್ಬಂದಿ ಶಾಖೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಚಿತ ವೇತನವನ್ನು ನಿಗದಿಪಡಿಸಲಾಗಿದೆ. ಗುತ್ತಿಗೆ ಆಧಾರದ ಮೇಲೆ ನೇಮಕಗೊಳ್ಳುವ ಮಾನ್ಯ ಶಾಸಕರ ಆಪ್ತ ಸಹಾಯಕರ ನೇಮಕಾತಿ ಷರತ್ತು ಮತ್ತು ನಿಬಂಧನೆಗಳನ್ನು ಆಡಳಿತದ ಹಿತದೃಷ್ಟಿಯಿಂದ ಸಂಬಂಧಪಟ್ಟ ಜಿಲ್ಲಾಧಿಕಾರಿಗಳೇ ಹೊರಡಿಸುವುದು ಸೂಕ್ತವೆಂದು ಪರಿಗಣಿಸಿ ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 123 ಅಹಿಸೇ 2010, ಬೆಂಗಳೂರು, ದಿನಾಂಕ 21-05-2010</u>**

ಸೂಕ್ತ ಪರಿಶೀಲನೆಯ ನಂತರ ಗ್ರೂಪ್ ಸಿ ವೃಂದದಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15(1)(ಎ)(VII)ರನ್ವಯ ಮಾನ್ಯ ಶಾಸಕರ ಆಪ್ತ ಸಹಾಯಕರಾಗಿ ನೇಮಕಗೊಂಡಿರುವ ನೌಕರರ ನೇಮಕಾತಿ ಷರತ್ತು ಮತ್ತು ನಿಬಂಧನೆಗಳನ್ನು ಅನುಬಂಧದಲ್ಲಿರುವಂತೆ ನೇಮಕ ಮಾಡಿರುವ ಹುದ್ದೆಗೆ ನಿಗದಿಪಡಿಸಿರುವ <u>ಸಂಚಿತ ವೇತನದಲ್ಲಿ ಆದೇಶ ಹೊರಡಿಸಲು</u> ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಅವಕಾಶ ನೀಡಿ ಆದೇಶಿಸಲಾಗಿದೆ.

ಮಾನ್ಯ ಶಾಸಕರ ಆಪ್ತ ಸಹಾಯಕರಾಗಿ ನೇಮಕಗೊಳ್ಳುವ ನಿಗಮ : ಮಂಡಳಿ ಸ್ಥಳೀಯ ಸಂಸ್ಥೆಗಳು : ಸ್ವಾಯತ್ತ : ಶಾಸನಬದ್ಧ ಸಂಸ್ಥೆಗಳ ಗ್ರೂಪ್ ಸಿ ನೌಕರರ ನೇಮಕಾತಿ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸಲು ಪ್ರಸ್ತಾವನೆಯನ್ನು ಪ್ರತ್ಯೇಕವಾಗಿ ಸರ್ಕಾರಕ್ಕೆ ಕಳುಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರುಕ್ಮಿಣಿ ದಿವಾಕರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ-1)
ದೂ.ಸಂ: 22032373

3. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭಾ ಸಚಿವಾಲಯ : ವಿಧಾನ ಪರಿಷತ್ತ್ ಸಚಿವಾಲಯ
4. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ
6. ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿಗಳು
7. ಎಲ್ಲಾ ವಿಭಾಗಾಧಿಕಾರಿಗಳು
8. ಎಲ್ಲಾ ಜಿಲ್ಲಾಧಿಕಾರಿಗಳು
9. ಎಲ್ಲಾ ಇಲಾಖಾ ಮುಖ್ಯಸ್ಥರು
10. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
11. ಎಲ್ಲಾ ಉಪವಿಭಾಗಾಧಿಕಾರಿಗಳು
12. ಎಲ್ಲಾ ತಹಶೀಲ್ದಾರರುಗಳು
13. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರಗಳು 1 : 2 : ಐಆರ್‌ಎಲ್‌ಎ) : (ಸಿಬ್ಬಂದಿ) : (ಕಾರ್ಯಕಾರಿ) : (ಆಡಳಿತ-2) : (ಆಡಳಿತ-3)
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-1)
15. ಸರ್ಕಾರದ ಕಾರ್ಯದರ್ಶಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಇವರ ಆಪ್ತ ಕಾರ್ಯದರ್ಶಿ
16. ಶಾಖಾಧಿಕಾರಿಗಳು, ಸಿಆಸುಇ (ಸಿಬ್ಬಂದಿ-1) : (ಸಿಬ್ಬಂದಿ-2) : (ಆಡಳಿತ-ಎ) : (ಆಡಳಿತ-ಬಿ) : (ಆಡಳಿತ-ಸಿ) : (ಆಡಳಿತ-ಡಿ) : (ಆಡಳಿತ ಇ)
17. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಡಳಿತ) ಇವರ ಆಪ್ತ ಸಹಾಯಕರು
18. ಶಾಖಾ ರಕ್ಷಾ ಕಡತ
19. ಹೆಚ್ಚಿನ ಪ್ರತಿಗಳು

ಅನುಬಂಧ

<u>ಗುತ್ತಿಗೆ ನೇಮಕಾತಿಯ ನಿಬಂಧನೆ ಹಾಗೂ ಷರತ್ತುಗಳು</u>

1. ________ ರ ಪ್ರಾಧಿಕಾರಿಗಳ ಆದೇಶ ಸಂಖ್ಯೆ ____ , ದಿನಾಂಕ ______ರಲ್ಲಿ ______ ಹುದ್ದೆಯಲ್ಲಿ ಗುತ್ತಿಗೆ ಆಧಾರದ ಮೇರೆಗೆ ನೇಮಕ ಮಾಡಿರುವ ಶ್ರೀ/ಶ್ರೀಮತಿ ______ ಇವರ ಗುತ್ತಿಗೆ ನೇಮಕಾತಿಯ ಅವಧಿಯು ದಿನಾಂಕ ____ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಶ್ರೀ ______ ಮಾನ್ಯ ಶಾಸಕರು, ______ ವಿಧಾನಸಭಾ/ವಿಧಾನಪರಿಷತ್ತು ಕ್ಷೇತ್ರ, ಇವರ ಪದಾವಧಿಯವರೆಗೆ ಅಥವಾ ಮುಂದಿನ ಆದೇಶ ಹೊರಡಿಸುವವರೆಗೆ ಇವರೆಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.
2. ಇವರ ಒಪ್ಪಂದದ ನೇಮಕಾತಿಗೆ ಕ್ರೋಢೀಕೃತ ಮಾಸಿಕ ಸಂಬಳ ರೂ. ____ (______ ರೂಪಾಯಿಗಳು ಮಾತ್ರ) ಗಳಿಗೆ ನಿಗದಿಪಡಿಸಲಾಗಿದೆ. ಇದಲ್ಲದೆ ಇನ್ನಿತರ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.
3. ಇವರು ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಯಾಣ ಮಾಡಬೇಕಾದಲ್ಲಿ ಮಾತ್ರ ಅವರ ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಸದರಿ ಒಪ್ಪಂದದ ನೌಕರರು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.
5. ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೆ ವೈದ್ಯಕೀಯ ಕಾರಣಗಳ ಮೇರೆಗಾಗಲಿ ಅಥವಾ ಬೇರೆ ಕಾರಣಗಳಿಂದಾಗಲೀ ಅನಧಿಕೃತ ಗೈರು ಹಾಜರಿಯಾದಲ್ಲಿ ಗುತ್ತಿಗೆ ಆಧಾರದ ನೇಮಕಾತಿಯು ತಾನಾಗಿಯೇ ರದ್ದಾಗುತ್ತದೆ.
6. ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆದು, ವೈದ್ಯಕೀಯ ಕಾರಣಗಳ ಮೇರೆ ಅಥವಾ ಸಮರ್ಥನೀಯ ಕಾರಣಗಳ ಮೇರೆಗೆ ಗುತ್ತಿಗೆ ಆಧಾರದ ಅವಧಿಯಲ್ಲಿ ಮೂರು ತಿಂಗಳಿಗೆ ಮೀರದಂತೆ, ಗೈರು ಹಾಜರಾದಲ್ಲಿ ಆ ಕಾರಣದಿಂದ ಗುತ್ತಿಗೆ ನೇಮಕಾತಿ ರದ್ದಾಗುವುದಿಲ್ಲ. ಆದರೆ ಈ ಅವಧಿಯಲ್ಲಿ ಕರ್ತವ್ಯ ರಹಿತ ದಿನಗಳೆಂದು (ಡೈಸ್ ನಾನ್) ಪರಿಗಣಿಸಲಾಗುವುದು ಮತ್ತು ಅವರು ಈ ಅವಧಿಗೆ ಯಾವುದೇ ವೇತನ ಮತ್ತು ಇತರ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.
7. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ, ವೇತನ, ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.
8. ಸದರಿ ನೌಕರರ ದುರ್ವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ಸಂಭವಿಸಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.
9. ಸದರಿ ಒಪ್ಪಂದದ ನೇಮಕಾತಿಯನ್ನು ಯಾವುದೇ ಕಾರಣಕ್ಕೂ ಖಾಯಂ ಎಂದು ಪರಿಗಣಿಸುವುದಿಲ್ಲ.
10. ಇವರು ತಮ್ಮ ಕರ್ತವ್ಯ, ಕಾರ್ಯ, ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ, ಮತ್ತು ಆಸಕ್ತಿಯಿಂದ ನಿರ್ವಹಿಸತಕ್ಕದ್ದು.
11. ಇವರು ತಮ್ಮ ಕರ್ತವ್ಯವನ್ನು ಪಾಲಿಸುತ್ತಿರುವಾಗ ಅಥವಾ ನೆರವೇರಿಸುತ್ತಿರುವಾಗ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
12. ಇವರು 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಬದ್ಧರಾಗಿರತಕ್ಕದ್ದು.
13. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.
14. ಇವರ ದುರ್ನಡತೆಯಿಂದಾಗಲೀ ಅಥವಾ ನಿರ್ಲಕ್ಷತೆ, ಉದಾಸೀನತೆಯಿಂದಾಗಲೀ ಮತ್ತು ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟವನ್ನು ಸರ್ಕಾರಕ್ಕೆ ತುಂಬಿಕೊಡಲು ಹೊಣೆಯಾಗಿರುತ್ತಾರೆ.
15. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ 50 ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಒಪ್ಪಿಸತಕ್ಕದ್ದು.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ವಿಧಾನ ಸಭೆ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಹೆಚ್ಚುವರಿಯಾಗಿ ಇನ್ನೊಬ್ಬ ಆಪ್ತ ಸಹಾಯಕರ ಸೇವೆಯನ್ನು ಒದಗಿಸುವ ಬಗ್ಗೆ.

-----

**ಓದಲಾಗಿದೆ:**

ಜಿಲ್ಲಾಧಿಕಾರಿಗಳ ಕಛೇರಿ
ದಾವಣಗೆರೆ

1. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ವಿಸಸ/ಕಾ/ಶಾರಶಾ/918/ಶಾಆಸನೀ/2013 ದಿನಾಂಕ:24.07.2013.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 180 ಶಿಸನೇ 2013 ದಿನಾಂಕ:24.09.2013.
3. ಅಧೀನ ಕಾರ್ಯದರ್ಶಿ, ಸಂಖ್ಯೆ:ಸಿಆಸುಇ (ಆಡಳಿತ) ಇವರ ಟಿಪ್ಪಣಿ ಸಂಖ್ಯೆ:ಸಿಆಸುಇ 1 ವಿಸಸೇ 2013, ದಿನಾಂಕ:29.10.2013.
4. ಸೇರ್ಪಡೆ ಆದೇಶ ಸಂಖ್ಯೆ:ಸಿಆಸುಇ 235 ಶಿಸನೇ 2013 ದಿನಾಂಕ:19.11.2013.
5. ಶ್ರೀ.ಬಸವರಾಜು ರಾಯರೆಡ್ಡಿ, ವಿಧಾನಸಭಾ ಸದಸ್ಯರು (ಯಲಬುರ್ಗಾ) ಇವರ ದಿನಾಂಕ:21.11.2013ರ ಪತ್ರ.

**ಪ್ರಸ್ತಾವನೆ:**

ಮೇಲೆ ಓದಲಾಗಿರುವ (1)ರ ಪತ್ರದಲ್ಲಿ ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಇವರು ಕೋರಿರುವಂತೆ, ಮೇಲೆ ಓದಲಾಗಿರುವ (2)ರ ಆದೇಶ ಹೊರಡಿಸಲಾಗಿತ್ತು. ಮೇಲೆ ಓದಲಾದ (3)ರ ಅಧೀನ ಕಾರ್ಯದರ್ಶಿ, ಸಿಆಸುಇ (ಆಡಳಿತ) ಇವರ ಟಿಪ್ಪಣಿಯಲ್ಲಿ ಕೆಲವು ಸ್ಪಷ್ಟೀಕರಣ ಕೋರಿದ್ದರ ಹಿನ್ನೆಲೆಯಲ್ಲಿ ಮೇಲೆ ಓದಲಾದ (4)ರ ಸೇರ್ಪಡೆ ಆದೇಶ ಹೊರಡಿಸಲಾಗಿತ್ತು. ಮೇಲೆ ಓದಲಾದ (5)ರ ಪತ್ರದಲ್ಲಿ ಮಾನ್ಯ ಶಾಸಕರು ಈಗ ಹೊರಡಿಸಿರುವ ಎರಡು ಆದೇಶಗಳಿಂದ ಶಾಸಕರುಗಳು ಹೆಚ್ಚುವರಿ ಆಪ್ತ ಸಹಾಯಕರನ್ನು ನೇಮಕ ಮಾಡಿಕೊಳ್ಳುತ್ತಿರುವ ಉದ್ದೇಶ ಈಡೇರುವುದಿಲ್ಲ ಎಂದು ತಿಳಿಸಿ, ಕೆಲವು ಮಾರ್ಪಾಡು ಮಾಡುವಂತೆ ಕೋರಿರುತ್ತಾರೆ. ಮಾನ್ಯ ಶಾಸಕರ ಕೋರಿಕೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಮಾಡಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 235 ಶಿಸನೇ 2013, ಬೆಂಗಳೂರು, ದಿನಾಂಕ:02.12.2013.**

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಮೇಲೆ ಓದಲಾದ (2) ಮತ್ತು (4)ರ ಆದೇಶಗಳನ್ನು ಹಿಂಪಡೆದು ಈ ಮುಂದಿನಂತೆ ಆದೇಶ ಮಾಡಲಾಗಿದೆ.

ವಿಧಾನಸಭಾ ಮತ್ತು ವಿಧಾನಪರಿಷತ್ ಸದಸ್ಯರುಗಳಿಗೆ ಇನ್ನೊಬ್ಬ ಹೆಚ್ಚುವರಿ ಆಪ್ತ ಸಹಾಯಕರನ್ನು ಕಂದಾಯ, ಆರೋಗ್ಯ, ಶಿಕ್ಷಣ ಮತ್ತು ಪೊಲೀಸ್ ಇಲಾಖೆಗಳಲ್ಲಿರುವ ತಾಂತ್ರಿಕ ಸಿಬ್ಬಂದಿಗಳನ್ನು ಹೊರತುಪಡಿಸಿ 'ಸಿ' ವೃಂದದ ಸಿಬ್ಬಂದಿಗಳನ್ನು ಮತ್ತು ಉಳಿದ ಎಲ್ಲಾ ಇಲಾಖೆಗಳ "ಸಿ" ವೃಂದದ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಬಹುದಾಗಿದೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ)ಯು ಗುತ್ತಿಗೆ ಆಧಾರದ ನೇಮಕಾತಿ ಬಗ್ಗೆ ವಿಧಿಸಿರುವ ಷರತ್ತು ನಿಬಂಧನೆಗಳಿಗನುಗುಣವಾಗಿ ಅರ್ಹ ನಿವೃತ್ತ ನೌಕರರನ್ನು ಹಾಗೂ ಅರ್ಹ ಖಾಸಗಿ ವ್ಯಕ್ತಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

. . . 2

ಹೆಚ್ಚುವರಿ ಆಪ್ತ ಸಹಾಯಕರ ವೇತನ ಮತ್ತು ಭತ್ಯೆಗಳನ್ನು ಪಾವತಿಸಲು ಸಿಆಸುಇ (ಲೆಕ್ಕಪತ್ರ -1) ವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 732 ವೆಚ್ಚ-12/2013 ದಿನಾಂಕ:16.09.2013ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎಸ್. ನಾಗರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜ್ಯ ಶಿಷ್ಟಾಚಾರ).

ಇವರಿಗೆ:

1. ಮಹಾಲೇಖಪಾಲರು (ಎ ಅಂಡ್ ಇ)/(ಆಡಿಟ್-1)/ಆಡಿಟ್-2), ಕರ್ನಾಟಕ, ಬೆಂಗಳೂರು-01.
2. ಕಾರ್ಯದರ್ಶಿಗಳು, ಕರ್ನಾಟಕ ವಿಧಾನಸಭೆ.
3. ಕಾರ್ಯದರ್ಶಿಗಳು, ಕರ್ನಾಟಕ ವಿಧಾನಪರಿಷತ್.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
7. ಎಲ್ಲಾ ವಿಧಾನ ಸಭಾ ಸದಸ್ಯರು / ವಿಧಾನ ಪರಿಷತ್ ಸದಸ್ಯರು.
8. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು-1,2, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಪರ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಆರ್ಥಿಕ ಇಲಾಖೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ-1/2) / ಆರ್ಥಿಕ ಇಲಾಖೆ (ಸೇವೆಗಳು-1)
11. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ವಿಧಾನ ಸಭೆ ಮತ್ತು ವಿಧಾನ ಪರಿಷತ್ ಸದಸ್ಯರುಗಳು ಆಪ್ತ ಸಹಾಯಕರನ್ನು ಅವರ ವಿವೇಚನೆಗನುಸಾರವಾಗಿ ನೇಮಿಸಿಕೊಳ್ಳುವ ಕುರಿತು.

-----

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 180 ಶಿಸನೇ 2013, ದಿನಾಂಕ: 24.09.2013.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 235 ಶಿಸನೇ 2013, ದಿನಾಂಕ: 02.12.2013.
3. ಮಾನ್ಯ ವಿಧಾನ ಸಭೆಯ ಕಾರ್ಯದರ್ಶಿಯವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಕವಿಸಸ/ಶಾರಶಾ/918/ಅ.ಸ.ಸೆ/2013, ದಿನಾಂಕ: 11.02.2015.

**ಪ್ರಸ್ತಾವನೆ:**

ಮೇಲೆ ಓದಲಾಗಿರುವ ಕ್ರಮ ಸಂಖ್ಯೆ: (1)ರ ಆದೇಶದಲ್ಲಿ ಮಾನ್ಯ ಶಾಸಕರಿಗೆ ಇನ್ನೊಬ್ಬ ಹೆಚ್ಚುವರಿ ಆಪ್ತ ಸಹಾಯಕರನ್ನು ನೇಮಿಸುವ ಆದೇಶದೊಂದಿಗೆ ಸರ್ಕಾರಿ ಇಲಾಖೆ / ಸ್ಥಳೀಯ ಸಂಸ್ಥೆ ಅಥವಾ ಶಾಸನಾಬದ್ಧ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ನೇಮಿಸಿಕೊಳ್ಳಲು ಅದೇಶ ಹೊರಡಿಸಲಾಗಿತ್ತು. ಈ ಆದೇಶವನ್ನು ಮಾರ್ಪಡಿಸಿ ಮೇಲೆ ಓದಲಾಗಿರುವ (2)ರ ಆದೇಶದಲ್ಲಿ ಕೆಲವು ಇಲಾಖೆಗಳನ್ನು ಹೊರತುಪಡಿಸಿ ಗುತ್ತಿಗೆ ಆಧಾರದ ಮೇಲೆ ಸರ್ಕಾರಿ ನೌಕರರಲ್ಲದೇ ಅರ್ಹ ಖಾಸಗಿ ವ್ಯಕ್ತಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಸರ್ಕಾರದ ಅನುಮೋದನೆ ನೀಡಲಾಗಿತ್ತು. ಮೇಲೆ ಓದಲಾಗಿರುವ ಕ್ರಮ ಸಂಖ್ಯೆ (3)ರಲ್ಲಿ ವಿಧಾನ ಪರಿಷತ್ ಕಾರ್ಯದರ್ಶಿಯವರು ದಿನಾಂಕ: 03.02.20154 ರಂದು ನಡೆದ ವಿಧಾನ ಸಭಾ ಕಾರ್ಯಕಲಾಪಗಳ ಸಲಹಾ ಸಮಿತಿಯ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ಮಾನ್ಯ ಶಾಸಕರ ವಿವೇಚನೆ ಮೇರೆಗೆ ಇಬ್ಬರು ಆಪ್ತ ಸಹಾಯಕರನ್ನು ನೇಮಿಸಿ ಕೊಳ್ಳಲು ಸೂಕ್ತ ಆದೇಶ / ತಿದ್ದುಪಡಿ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಮಾಡಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 48 ಶಿಸನೇ 2015 ಬೆಂಗಳೂರು, ದಿನಾಂಕ: 11.05.2015.**

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಮಾನ್ಯ ಶಾಸಕರುಗಳು ಇಬ್ಬರು ಆಪ್ತ ಸಹಾಯಕರುಗಳನ್ನು ಅವರ ವಿವೇಚನೆಯ ಮೇರೆಗೆ ಮೇಲೆ ಓದಲಾದ (2)ರ ಅದೇಶದಲ್ಲಿ ಹೇಳಿರುವ ಕೆಲವು ಸರ್ಕಾರಿ ಇಲಾಖೆಗಳನ್ನು ಹೊರತುಪಡಿಸಿ ಗ್ರೂಪ್ 'ಸಿ' ವೃಂದದ ನೌಕರರನ್ನಾಗಲಿ ಅಥವಾ ಖಾಸಗಿ ವ್ಯಕ್ತಿಗಳನ್ನಾಗಲಿ ನೇಮಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎಸ್. ನಾಗರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಿ.ಆ.ಸು.ಇಲಾಖೆ (ರಾಜ್ಯ ಶಿಷ್ಟಾಚಾರ).

ಇವರಿಗೆ:

1. ಮಹಾಲೇಖಪಾಲರು (ಎ. ಅಂಡ್ ಇ.) / (ಆಡಿಟ್-1) / (ಆಡಿಟ್-2), ಕರ್ನಾಟಕ, ಬೆಂಗಳೂರು-560 001.

..2..

2. ಕಾರ್ಯದರ್ಶಿಗಳು. ಕರ್ನಾಟಕ ವಿಧಾನ ಸಭೆ.
3. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
7. ಎಲ್ಲಾ ವಿಧಾನ ಸಭಾ ಸದಸ್ಯರು / ವಿಧಾನ ಪರಿಷತ್ ಸದಸ್ಯರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆಪ್ತ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಆರ್ಥಿಕ ಇಲಾಖೆ.
9. ಜಂಟಿ ಕಾರ್ಯದರ್ಶಿಗಳು, ಸಿಆಸುಇ (ಆಡಳಿತ) ಮತ್ತು (ಸಿಬ್ಬಂದಿ), ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕ ಪತ್ರ-1/2) ಸಿಆಸುಇ (ಆಡಳಿತ-1,2,&3), ಆರ್ಥಿಕ ಇಲಾಖೆ (ಸೇವೆಗಳು-1)
11. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ವಿಧಾನ ಸಭೆ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಹೆಚ್ಚುವರಿಯಾಗಿ ಇನ್ನೊಬ್ಬ ಆಪ್ತ ಸಹಾಯಕರ ಸೇವೆಯನ್ನು ಒದಗಿಸುವ ಬಗ್ಗೆ.

-----

ಓದಲಾಗಿದೆ:

1. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ವಿಸಸ/ಕಾ/ಶಾರಶಾ/918/ಶಾಆಸನೀ/2013 ದಿನಾಂಕ:24.07.2013.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 180 ಶಿಸನೇ 2013 ದಿನಾಂಕ:24.09.2013.
3. ಅಧೀನ ಕಾರ್ಯದರ್ಶಿ, ಸಂಖ್ಯೆ:ಸಿಆಸುಇ (ಆಡಳಿತ) ಇವರ ಟಿಪ್ಪಣಿ ಸಂಖ್ಯೆ:ಸಿಆಸುಇ 1 ವಿಸಸೇ 2013, ದಿನಾಂಕ:29.10.2013.
4. ಸೇರ್ಪಡೆ ಆದೇಶ ಸಂಖ್ಯೆ:ಸಿಆಸುಇ 235 ಶಿಸನೇ 2013 ದಿನಾಂಕ:19.11.2013.
5. ಶ್ರೀ.ಬಸವರಾಜು ರಾಯರೆಡ್ಡಿ, ವಿಧಾನಸಭಾ ಸದಸ್ಯರು (ಯಲಬುರ್ಗಾ) ಇವರ ದಿನಾಂಕ:21.11.2013ರ ಪತ್ರ.

ಪ್ರಸ್ತಾವನೆ:

ಮೇಲೆ ಓದಲಾಗಿರುವ (1)ರ ಪತ್ರದಲ್ಲಿ ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಇವರು ಕೋರಿರುವಂತೆ, ಮೇಲೆ ಓದಲಾಗಿರುವ (2)ರ ಆದೇಶ ಹೊರಡಿಸಲಾಗಿತ್ತು. ಮೇಲೆ ಓದಲಾದ (3)ರ ಅಧೀನ ಕಾರ್ಯದರ್ಶಿ, ಸಿಆಸುಇ (ಆಡಳಿತ) ಇವರ ಟಿಪ್ಪಣಿಯಲ್ಲಿ ಕೆಲವು ಸ್ಪಷ್ಟೀಕರಣ ಕೋರಿದ್ದರ ಹಿನ್ನೆಲೆಯಲ್ಲಿ ಮೇಲೆ ಓದಲಾದ (4)ರ ಸೇರ್ಪಡೆ ಆದೇಶ ಹೊರಡಿಸಲಾಗಿತ್ತು. ಮೇಲೆ ಓದಲಾದ (5)ರ ಪತ್ರದಲ್ಲಿ ಮಾನ್ಯ ಶಾಸಕರು ಈಗ ಹೊರಡಿಸಿರುವ ಎರಡು ಆದೇಶಗಳಿಂದ ಶಾಸಕರುಗಳು ಹೆಚ್ಚುವರಿ ಆಪ್ತ ಸಹಾಯಕರನ್ನು ನೇಮಕ ಮಾಡಿಕೊಳ್ಳುತ್ತಿರುವ ಉದ್ದೇಶ ಈಡೇರುವುದಿಲ್ಲ ಎಂದು ತಿಳಿಸಿ, ಕೆಲವು ಮಾರ್ಪಾಡು ಮಾಡುವಂತೆ ಕೋರಿರುತ್ತಾರೆ. ಮಾನ್ಯ ಶಾಸಕರ ಕೋರಿಕೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಮಾಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 235 ಶಿಸನೇ 2013, ಬೆಂಗಳೂರು, ದಿನಾಂಕ:02.12.2013.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಮೇಲೆ ಓದಲಾದ (2) ಮತ್ತು (4)ರ ಆದೇಶಗಳನ್ನು ಹಿಂಪಡೆದು ಈ ಮುಂದಿನಂತೆ ಆದೇಶ ಮಾಡಲಾಗಿದೆ.

ವಿಧಾನಸಭಾ ಮತ್ತು ವಿಧಾನಪರಿಷತ್ ಸದಸ್ಯರುಗಳಿಗೆ ಇನ್ನೊಬ್ಬ ಹೆಚ್ಚುವರಿ ಆಪ್ತ ಸಹಾಯಕರನ್ನು ಕಂದಾಯ, ಆರೋಗ್ಯ, ಶಿಕ್ಷಣ ಮತ್ತು ಪೊಲೀಸ್ ಇಲಾಖೆಗಳಲ್ಲಿರುವ ತಾಂತ್ರಿಕ ಸಿಬ್ಬಂದಿಗಳನ್ನು ಹೊರತುಪಡಿಸಿ 'ಸಿ' ವೃಂದದ ಸಿಬ್ಬಂದಿಗಳನ್ನು ಮತ್ತು ಉಳಿದ ಎಲ್ಲಾ ಇಲಾಖೆಗಳ 'ಸಿ' ವೃಂದದ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಬಹುದಾಗಿದೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ)ಯು ಗುತ್ತಿಗೆ ಆಧಾರದ ನೇಮಕಾತಿ ಬಗ್ಗೆ ವಿಧಿಸಿರುವ ಷರತ್ತು ನಿಬಂಧನೆಗಳಿಗನುಗುಣವಾಗಿ ಅರ್ಹ ನಿವೃತ್ತ ನೌಕರರನ್ನು ಹಾಗೂ ಅರ್ಹ ಖಾಸಗಿ ವ್ಯಕ್ತಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

. . . 2

ಹೆಚ್ಚುವರಿ ಆಪ್ತ ಸಹಾಯಕರ ವೇತನ ಮತ್ತು ಭತ್ಯೆಗಳನ್ನು ಪಾವತಿಸಲು ಸಿಆಸುಇ (ಲೆಕ್ಕಪತ್ರ –1) ಕ್ರಮ ವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 732 ವೆಚ್ಚ-12/2013 ದಿನಾಂಕ:16.09.2013ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎಸ್. ನಾಗರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜ್ಯ ಶಿಷ್ಟಾಚಾರ).

ಇವರಿಗೆ:

1. ಮಹಾಲೇಖಪಾಲರು (ಎ ಅಂಡ್ ಇ)/(ಆಡಿಟ್-1)/ಆಡಿಟ್-2), ಕರ್ನಾಟಕ, ಬೆಂಗಳೂರು-01.
2. ಕಾರ್ಯದರ್ಶಿಗಳು, ಕರ್ನಾಟಕ ವಿಧಾನಸಭೆ.
3. ಕಾರ್ಯದರ್ಶಿಗಳು, ಕರ್ನಾಟಕ ವಿಧಾನಪರಿಷತ್.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
7. ಎಲ್ಲಾ ವಿಧಾನ ಸಭಾ ಸದಸ್ಯರು / ವಿಧಾನ ಪರಿಷತ್ ಸದಸ್ಯರು.
8. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು-1,2, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆಪ್ತ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಆರ್ಥಿಕ ಇಲಾಖೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ-1/2) / ಆರ್ಥಿಕ ಇಲಾಖೆ (ಸೇವೆಗಳು-1)
11. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.